# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☎:0816-2255650,2273511 ಫ್ಯಾಕ್ಸ್:0816-2270719

ಸಂಖ್ಯೆ:ತುವಿ:ಪವಿ:2024-25/ 185

ದಿನಾಂಕ:10.06.2024

## : ಸುತ್ತೋಲೆ :

ವಿಷಯ : ವಿವಿಧ ಸ್ನಾತಕ ಪದವಿಯ ಸೈದ್ಧಾಂತಿಕ ಪರೀಕ್ಷೆಗಳಲ್ಲಿ ನೀಡುತ್ತಿರುವ 24 ಪುಟಗಳುಳ್ಳ ಉತ್ತರ ಪತ್ರಿಕೆಗಳಲ್ಲಿನ ಪುಟಗಳ ಸಂಖ್ಯೆಯ ಕುರಿತು ವಿದ್ಯಾರ್ಥಿಗಳು ಸಲ್ಲಿಸಿರುವ ಮನವಿ ಸಂಬಂಧ ಚರ್ಚಿಸಲು ಪ್ರಾಂಶುಪಾಲರುಗಳ ಸಭೆ ಏರ್ಪಡಿಸಿರುವ ಕುರಿತು.

ಉಲ್ಲೇಖ : 1. ಕಲ್ಪತರು ಪ್ರಥಮ ದರ್ಜೆ ವಿಜ್ಞಾನ ಕಾಲೇಜು, ತಿಪಟೂರು ಇಲ್ಲಿನ ಬಿ.ಸಿ.ಎ. ಪದವಿ ವಿದ್ಯಾರ್ಥಿಗಳು ಸಲ್ಲಿಸಿರುವ ಪತ್ರದ ದಿನಾಂಕ:16.05.2024
2. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:06.06.2024

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಲ್ಪತರು ಪ್ರಥಮ ದರ್ಜೆ ವಿಜ್ಞಾನ ಕಾಲೇಜು, ತಿಪಟೂರು ಈ ಕಾಲೇಜಿನಲ್ಲಿ ಬಿ.ಸಿ.ಎ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಪ್ರಾಂಶುಪಾಲರ ಮುಖಾಂತರ ಉಲ್ಲೇಖ (1) ರ ಪತ್ರ ಸಲ್ಲಿಸಿ, ಸೈದ್ಧಾಂತಿಕ ಪರೀಕ್ಷೆಗಳಲ್ಲಿ ನೀಡುತ್ತಿರುವ 24 (ಇಪ್ಪತ್ನಾಲ್ಕು) ಪುಟಗಳುಳ್ಳ ಉತ್ತರ ಪತ್ರಿಕೆಯಲ್ಲಿ ನಮಗೆ ಉತ್ತರಗಳು ಗೊತ್ತಿದ್ದರೂ ಸಹ ಬರೆಯಲು ಪುಟಗಳ ಕೊರತೆಯಿದ್ದು, ಈ ಸಂಬಂಧ ಉತ್ತರ ಪುಸ್ತಕಗಳಲ್ಲಿನ ಪುಟಗಳ ಸಂಖ್ಯೆಯನ್ನು ಹೆಚ್ಚಿಸುವಂತೆ ವಿನಂತಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಉಲ್ಲೇಖ (2) ರ ಮಾನ್ಯ ಕುಲಪತಿಗಳ ಸೂಚನೆಯ ಮೇರೆಗೆ ಸದರಿ ವಿಷಯವಾಗಿ ಚರ್ಚಿಸಲು ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು **ದಿನಾಂಕ:14.06.2024 ರ ಶುಕ್ರವಾರದಂದು ಮಧ್ಯಾಹ್ನ 03.00 ಘಂಟೆಗೆ ಕಡ್ಡಾಯವಾಗಿ ಆನ್‌ಲೈನ್ ಸಭೆಗೆ ಹಾಜರಾಗುವಂತೆ ಈ ಮೂಲಕ ತಮಗೆ ತಿಳಿಸುತ್ತಾ, ಸಂಬಂಧಪಟ್ಟ ಲಿಂಕ್ ಅನ್ನು ನಂತರದಲ್ಲಿ ಹಂಚಿಕೊಳ್ಳಲಾಗುವುದು.**

10/6/24

**ಕುಲಸಚಿವರು(ಮೌಲ್ಯಮಾಪನ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಎಲ್ಲಾ ಪ್ರಾಂಶುಪಾಲರುಗಳು, ಘಟಕ / ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು :**

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.**
5. ವಿಭಾಗದ ಮೇಲ್ವಿಚಾರಕರು, ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಛೇರಿ ಪ್ರತಿ.